## ಪತ್ರಿಕಾ ತುಣುಕುಗಳು
## PAPER CLIPPINGS

54

ಇಲಾಖೆ / ವಿಷಯ : DEPARTMENT / SUBJECT: ಗೃಹ - ಸಿ-ಡಿ ಪ್ರಕರಣ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ    ದಿನಾಂಕ : DATE : 6/3/2021

# ಜಾರಕಿಹೊಳಿ ವಿರುದ್ಧ ಷಡ್ಯಂತ್ರ

ಬೆಂಗಳೂರು: ಮಾಜಿ ಸಚಿವ ರಮೇಶ್ ಜಾರಕಿಹೊಳಿ ಇದ್ದಾರೆ ಎನ್ನಲಾದ ಕಾಮಕೇಳಿ ವಿಡಿಯೋದ ಮೂಲ ಪತ್ತೆಹಚ್ಚಲು ಪೊಲೀಸರು ತನಿಖೆ ಚುರುಕುಗೊಳಿಸಿರುವ ಬೆನ್ನಲ್ಲೇ ಸಿಡಿ ಬಿಡುಗಡೆಯ ಹಿಂದೆ ವಿರೋಧ ಪಕ್ಷದ ಇಬ್ಬರು ಪ್ರಭಾವಿಗಳಿದ್ದಾರೆ ಎಂಬ ಮಾತುಗಳು ಕೇಳಿಬರುತ್ತಿವೆ.



ಅಲ್ಲದೇ 1 ವರ್ಷದ ಹಿಂದೆ ರೆಕಾರ್ಡ್ ಆಗಿರುವ ಸಿಡಿಯನ್ನು ಈಗ ಬಿಡುಗಡೆ ಮಾಡಲಾಗಿದೆ ಎಂದೂ ಹೇಳಲಾಗುತ್ತಿದೆ. ರಾಜಕೀಯ ವೈಷಮ್ಯದ ಹಿನ್ನೆಲೆಯಲ್ಲಿ ದಕ್ಷಿಣದ ಒಬ್ಬರು ಹಾಗೂ ಬೆಳಗಾವಿ ಭಾಗದ ಒಬ್ಬರು ಸೇರಿಕೊಂಡು ವಿಡಿಯೋ ಬಿಡುಗಡೆ ಮಾಡಿಸಿದ್ದಾರೆ ಎಂಬ ಮಾತುಗಳಿವೆ. ಬೇರೊಬ್ಬರು ಮಾಡಿದ್ದ ಸೆಕ್ಸ್ ವಿಡಿಯೋ ಬಗ್ಗೆ ಮಾಹಿತಿ ತಿಳಿದುಕೊಂಡ ಆ ಇಬ್ಬರು ಪ್ರಭಾವಿಗಳು ದಿನೇಶ್ ಕಲ್ಲಹಳ್ಳಿ ಮುಖಾಂತರ ಸಿಡಿ ಬಿಡುಗಡೆ ಮಾಡಿಸಿದ್ದಾರೆ ಎನ್ನಲಾಗುತ್ತಿದೆ. ಇದೆಲ್ಲದರ ಜತೆಗೆ ಬಿಜೆಪಿ ಪಕ್ಷದಲ್ಲಿರುವವರೇ ಕೆಲವರು ಷಡ್ಯಂತ್ರ ರೂಪಿಸಿ ಸಿಡಿ ಬಹಿರಂಗಪಡಿಸಿದ್ದಾರೆ ಎನ್ನಲಾಗಿದೆ.